**Akashvani : Bangalore**
**Regional Bulletin In Kannada**
**12.03.2026 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**12.03.2026 / 18.40 hrs**

***************

ಮುಖ್ಯಾಂಶಗಳು

೧. ವಿಧಾನಸಭೆಯಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯವೈಖರಿ ಕುರಿತು ವಿಶೇಷ ಚರ್ಚೆ - ಪರೀಕ್ಷಾ ಮೌಲ್ಯಮಾಪನ ಮಂಡಳಿ ರಚಿಸುವಂತೆ ಪ್ರತಿಪಕ್ಷಗಳ ಸಲಹೆ

೨. ತುಂಗಭದ್ರಾ ಅಣೆಕಟ್ಟಿನ ಕ್ರಸ್ಟ್ ಗೇಟ್‌ಗಳ ಬದಲಾವಣೆ ಮೇ ತಿಂಗಳ ವೇಳೆಗೆ ಪೂರ್ಣ; ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್

೩. ಹೊರ ರಾಜ್ಯದಿಂದ ಬರುವ ಅಕ್ರಮ ಮದ್ಯ ತಡೆಗೆ ಕಟ್ಟುನಿಟ್ಟಿನ ಕ್ರಮ -ಮೇಲ್ಮನೆಯಲ್ಲಿ ಸರ್ಕಾರ ಸ್ಪಷ್ಟನೆ

೪. ಜನತೆಯ ನಿರೀಕ್ಷೆ ಹುಸಿಗೊಳಿಸಿದ ರಾಜ್ಯ ಬಜೆಟ್ - ಶಾಸಕ ವಿಜಯೇಂದ್ರ ಆರೋಪ

೫. ನಾಳೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಕಿಸಾನ್ ಸಮ್ಮಾನ್ ಯೋಜನೆಯ ೨೨ನೇ ಕಂತು ಬಿಡುಗಡೆ

***************

ವಿಧಾನಸಭೆಯಲ್ಲಿಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯ ನಿರ್ವಹಣೆಯ ಕುರಿತು ವಿಶೇಷ ಚರ್ಚೆ ನಡೆಯಿತು. ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಬಿಜೆಪಿಯ ಸುನೀಲ್ ಕುಮಾರ್ ಕೆಪಿಎಸ್‌ಸಿಯಲ್ಲಿ ನಿರಂತರವಾಗಿ ನಡೆಯುವ ಭ್ರಷ್ಟಾಚಾರ ಮತ್ತು ಅವ್ಯವಹಾರದಿಂದ ರಾಜ್ಯದ ಪ್ರಾಮಾಣಿಕ ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳುಗೆಡುವ ಕಾರ್ಯ ನಡೆಯುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಪರೀಕ್ಷೆ ಬರೆದ ಅಭ್ಯರ್ಥಿಗಳಿಗೆ ಆದ ಅನ್ಯಾಯದ ಬಗ್ಗೆ ಕೆಪಿಎಸ್‌ಸಿ ಮತ್ತು ಸರ್ಕಾರ ಪ್ರತಿಕ್ರಿಯೆ ನೀಡದೆ ಮೌನವಾಗಿರುವುದು ಸಂಶಯ ಇನ್ನಷ್ಟು ಹೆಚ್ಚಲು ಕಾರಣವಾಗಿದೆ ಎಂದು ಹೇಳಿದರು.

ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಬಿಜೆಪಿಯ ಸುರೇಶ್ ಕುಮಾರ್ ಕೆಪಿಎಸ್‌ಸಿ ಒಂದು ವಿಶ್ವಾಸಾರ್ಹವಲ್ಲದ ಸಂಸ್ಥೆಯಾಗಿದೆ. ಕೆಪಿಎಸ್‌ಸಿ ಕಾರ್ಯದರ್ಶಿಗಳನ್ನು ಮತ್ತೆ ಮತ್ತೆ ಬದಲಾಯಿಸುವುದು ಒಳ್ಳೆಯ ಲಕ್ಷಣ ಅಲ್ಲ ಎಂದು ಸರ್ಕಾರಕ್ಕೆ ಸಲಹೆ ನೀಡಿದರು. ಅವ್ಯವಹಾರ ತಡೆಯಲು ಪರೀಕ್ಷಾ ಮೌಲ್ಯಮಾಪನ ಮಂಡಳಿ ರಚಿಸಬೇಕು ಎಂದು ಸಲಹೆ ನೀಡಿದರು.

ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಕೆಪಿಎಸ್‌ಸಿ ಪರೀಕ್ಷೆ ನಡೆಸಿ, ಮೌಲ್ಯಮಾಪನ ಮಾಡಿ, ತಾತ್ಕಾಲಿಕ ಪಟ್ಟಿ ಬಿಡುಗಡೆ ಮಾಡುತ್ತದೆ. ಕೊನೆಗೆ ಕೆಪಿಎಸ್‌ಸಿ ಸದಸ್ಯರೆ ಮುಖ್ಯಮಂತ್ರಿ ಹತ್ತಿರ ಬಂದು ತಾತ್ಕಾಲಿಕ ಪಟ್ಟಿ ಸರಿಯಿಲ್ಲ ಎಂದು ದೂರು ನೀಡುತ್ತಾರೆ ಎಂದು ಸಂಸ್ಥೆಯ ಹುಳುಕನ್ನು ಅನಾವರಣಗೊಳಿಸಿದರು.

***************

ತುಂಗಭದ್ರಾ ಅಣೆಕಟ್ಟಿನ ಎಲ್ಲಾ ಕ್ರಸ್ಟ್ ಗೇಟ್‌ಗಳ ಬದಲಾವಣೆ ಕಾರ್ಯವನ್ನು ಸರ್ಕಾರ ಆದ್ಯತೆ ಮೇರೆಗೆ ಕೈಗೆತ್ತಿಕೊಂಡಿದ್ದು, ಮೇ ತಿಂಗಳ ವೇಳೆಗೆ ಪೂರ್ಣಗೊಳಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮೇಲ್ಮನೆಯಲ್ಲಿ ಭರವಸೆ ನೀಡಿದ್ದಾರೆ.

ಜೆಡಿಎಸ್‌ನ ಟಿ.ಎ. ಶರವಣ ಅವರು ವಿಚಾರ ಪ್ರಸ್ತಾಪಿಸಿದಾಗ ಪ್ರತಿಕ್ರಿಯಿಸಿದ ಅವರು, ೨೫ ಗೇಟ್‌ಗಳ ಫ್ಯಾಬ್ರಿಕೇಶನ್ ಕೆಲಸ ಮುಗಿದಿದ್ದು, ಎರಡು ಗೇಟ್‌ಗಳ ಕೆಲಸ ನಡೆಯುತ್ತಿದೆ. ೨೬ ಗೇಟ್‌ಗಳನ್ನು ತೆಗೆಯಲಾಗಿದ್ದು, ಎರಡು ಗೇಟ್‌ಗಳ ತೆರವು ಕಾರ್ಯ ನಡೆಯುತ್ತಿದೆ.

ಇದರಲ್ಲಿ ೧೪ ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣಗೊಂಡಿದ್ದು, ಮೂರು ಗೇಟ್‌ಗಳ ಅಳವಡಿಕೆ ಕಾರ್ಯ ನಡೆಯುತ್ತಿದೆ. ಮೇ ತಿಂಗಳೊಳಗೆ ಎಲ್ಲಾ ಗೇಟ್ ಬದಲಾವಣೆ ಮಾಡಲು ವ್ಯವಸ್ಥೆ ಮಾಡಲಾಗಿದೆ ಎಂದು ಸದನಕ್ಕೆ ಮಾಹಿತಿ ನೀಡಿದ್ದಾರೆ.

ಇದೇ ವೇಳೆ ನವಲಿ ಸಮತೋಲಿತ ಜಲಾಶಯ ನಿರ್ಮಾಣ ವಿಚಾರದಲ್ಲಿ ಆಂಧ್ರಪ್ರದೇಶ ಸರ್ಕಾರ ಮಾತುಕತೆಗೆ ಬರುತ್ತಿಲ್ಲ ಎಂದು ತಿಳಿಸಿದ್ದಾರೆ.

***************

ಗೋವಾ ಸೇರಿದಂತೆ ಹೊರ ರಾಜ್ಯದಿಂದ ಬರುವ ಅಕ್ರಮ ಮದ್ಯ ತಡೆಗೆ ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುವುದಾಗಿ ಸಚಿವ ಎನ್.ಎಸ್. ಬೋಸರಾಜು ಮೇಲ್ಮನೆಯಲ್ಲಿ ಭರವಸೆ ನೀಡಿದ್ದಾರೆ.

ಪ್ರಶ್ನೋತ್ತರ ಕಲಾಪದಲ್ಲಿ ಸದಸ್ಯ ನಾಗರಾಜ್ ಯಾದವ್ ಅವರ ಪ್ರಶ್ನೆಗೆ ಅಬಕಾರಿ ಸಚಿವ ತಿಮ್ಮಾಪುರ್ ಪರವಾಗಿ ಉತ್ತರ ನೀಡಿದ ಸಚಿವ ಬೋಸರಾಜು, ಏಪ್ರಿಲ್ ೨೦೨೫ರಿಂದ ಫೆಬ್ರವರಿ ಅಂತ್ಯದವರೆಗೆ ಅಬಕಾರಿ ಇಲಾಖೆಯು ೩೩ ಸಾವಿರದ ೩೭೦.೫೪ ಕೋಟಿ ರೂಪಾಯಿ ಸಂಗ್ರಹಿಸಿದೆ. ಈ ವರ್ಷ ಮದ್ಯ ಮಾರಾಟ ೦.೫೧ರಷ್ಟು ಮಾರಾಟ ಕುಸಿತ ಕಂಡಿದೆ ಎಂದು ಸದನಕ್ಕೆ ಮಾಹಿತಿ ನೀಡಿದರು.

ಜನವರಿ ಅಂತ್ಯಕ್ಕೆ ಬಿಯರ್ ಮಾರಾಟ ಶೇಕಡ ೧೪.೫೯ರಷ್ಟು ಕಡಿಮೆಯಾಗಿದೆ. ಚಿಕ್ಕಬಳ್ಳಾಪುರ, ಕೋಲಾರ, ರಾಯಚೂರು ಸೇರಿದಂತೆ ಕೆಲವು ಜಿಲ್ಲೆಗಳ ಗಡಿ ಭಾಗದಲ್ಲಿ ಹೊರ ರಾಜ್ಯದ ಗ್ರಾಹಕರು ರಾಜ್ಯದ ಮದ್ಯ ಖರೀದಿಸುವುದು ಕಡಿಮೆಯಾಗಿರುವುದರಿಂದ ಮದ್ಯ ಮಾರಾಟದಲ್ಲಿ ಕುಸಿತವಾಗಿದೆ.

ಗೋವಾ ರಾಜ್ಯದಿಂದ ನಕಲಿ ಮದ್ಯ ರಾಜ್ಯ ಪ್ರವೇಶಿಸುವುದನ್ನು ತಡೆಯಲಾಗಿದ್ದು, ೧೩೨ ಜಾಮೀನು ರಹಿತ ಪ್ರಕರಣಗಳನ್ನು ದಾಖಲಿಸಲಾಗಿದೆ. ಸುಮಾರು ೧೩ ಕೋಟಿ ೬೫ ಲಕ್ಷ ರೂಪಾಯಿ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಸದನಕ್ಕೆ ತಿಳಿಸಿದ್ದಾರೆ.

***************

ರಾಯಚೂರು ಜಿಲ್ಲೆಯ ಹಟ್ಟಿ ಚಿನ್ನದ ಗಣಿಗಳಲ್ಲಿ ಕಾರ್ಮಿಕರಿಗೆ ತುರ್ತು ವೈದ್ಯಕೀಯ ಸೌಲಭ್ಯಗಳ ಕೊರತೆಯ ಬಗ್ಗೆ ವಿಧಾನಸಭೆಯಲ್ಲಿ ಕಳವಳ ವ್ಯಕ್ತಪಡಿಸಲಾಯಿತು. ಬಿಜೆಪಿ ಶಾಸಕ ಮಾನಪ್ಪ ಡಿ. ವಜ್ಜಲ್ ವಿಷಯ ಪ್ರಸ್ತಾಪಿಸಿ ಈ ಪ್ರದೇಶದಲ್ಲಿ ಆಸ್ಪತ್ರೆ ಸ್ಥಾಪಿಸುವಂತೆ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಹಟ್ಟಿ ಚಿನ್ನದ ಗಣಿಗಳಲ್ಲಿ ಸುಮಾರು ೬,೦೦೦ ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ. ಹೃದಯಾಘಾತದಂತಹ ವೈದ್ಯಕೀಯ ತುರ್ತು ಸಂದರ್ಭಗಳಲ್ಲಿ ಅವರಿಗೆ ಚಿಕಿತ್ಸೆ ನೀಡಲು ೧೦೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಒಂದೇ ಒಂದು ಆಸ್ಪತ್ರೆ ಇಲ್ಲ ಎಂದು ಸದನದ ಗಮನ ಸೆಳೆದಿದ್ದಾರೆ. ಚಿಕಿತ್ಸೆ ಪಡೆಯುವಲ್ಲಿ ವಿಳಂಬದಿಂದಾಗಿ ಅನೇಕರು ದಾರಿಯಲ್ಲಿ ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದಾರೆ.

ಕಾರ್ಮಿಕರಿಗೆ ಬೆಳಗಾವಿ ಮತ್ತು ಬೆಂಗಳೂರಿನಲ್ಲಿ ಆಸ್ಪತ್ರೆ ಸೌಲಭ್ಯಗಳಿಗೆ ಕಂಪನಿಯು ವ್ಯವಸ್ಥೆ ಮಾಡಿದೆ, ಇದರಿಂದಾಗಿ ಕಾರ್ಮಿಕರು ಚಿಕಿತ್ಸೆಗಾಗಿ ಬಹಳ ದೂರ ಪ್ರಯಾಣಿಸಬೇಕಾಗುತ್ತದೆ ಎಂದು ತಿಳಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಂಡಿಸಿದ ೨೦೨೬-೨೭ನೇ ಸಾಲಿನ ಬಜೆಟ್ ರಾಜ್ಯದ ಜನತೆಯ ನಿರೀಕ್ಷೆ ಹುಸಿಗೊಳಿಸಿದೆ ಎಂದು ಶಾಸಕ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ವಿಧಾನಸಭೆಯಲ್ಲಿ ಬಜೆಟ್ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಆದಾಯ ಸಂಗ್ರಹದಲ್ಲಿ ಸರ್ಕಾರ ವಿಫಲವಾಗಿದ್ದು, ಅತಿ ಹೆಚ್ಚು ಸಾಲ ಮಾಡುವ ಮೂಲಕ ರಾಜ್ಯವನ್ನು ಸಾಲದ ಸುಳಿಗೆ ಸಿಲುಕಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ಕೇಂದ್ರ ಸರ್ಕಾರದ ವಿರುದ್ಧ ಆರೋಪ ಮಾಡುವುದನ್ನು ಬಿಟ್ಟು ರಾಜ್ಯದ ಸಮಗ್ರ ಅಭಿವೃದ್ಧಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಒತ್ತು ನೀಡಿದರೆ ಒಳಿತು ಎಂದು ಸಲಹೆ ನೀಡಿದ್ದಾರೆ.

***************

ಪ್ರಧಾನಿ ನರೇಂದ್ರ ಮೋದಿ ಅವರು, ಅಸ್ಸಾಂನ ಗುವಾಹಟಿಯಲ್ಲಿ ನಾಳೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿಯ ೨೨ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ.

ಸುಮಾರು ೯ ಕೋಟಿ ೩೨ ಲಕ್ಷ ರೈತರ ಬ್ಯಾಂಕ್ ಖಾತೆಗಳಿಗೆ ನೇರ ವರ್ಗಾವಣೆ ಮೂಲಕ ೧೮ ಸಾವಿರದ ೬೪೦ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಲಿದ್ದಾರೆ.

ಈ ಯೋಜನೆಯಡಿ ಇದುವರೆಗೆ ರೈತರಿಗೆ ೪ ಲಕ್ಷ ೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು ವರ್ಗಾಯಿಸಲಾಗಿದೆ. ಮುಂದಿನ ಕಂತಿನ ಬಿಡುಗಡೆಯೊಂದಿಗೆ ಒಟ್ಟು ಮೊತ್ತ ೪ ಲಕ್ಷ ೨೭ ಸಾವಿರ ಕೋಟಿ ರೂಪಾಯಿಗಳನ್ನು ಮೀರಲಿದೆ ಎಂದು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾಹಿತಿ ನೀಡಿದ್ದಾರೆ.

***************

ಐಐಐಟಿ ಧಾರವಾಡದ ಕ್ವಾಂಟಮ್ ಕಂಪ್ಯೂಟಿಂಗ್ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ QpiAI ಇಂಡಸ್ ೨೫-ಕ್ವಿಟ್ ಕ್ವಾಂಟಮ್ ಕಂಪ್ಯೂಟರ್ ಅನ್ನು ಸ್ಥಾಪಿಸುವ ಮೂಲಕ ಮತ್ತು ಐಐಐಟಿ ರಾಯಚೂರು ಜಂಟಿಯಾಗಿ ಪ್ರವೇಶಿಸುವ ಮೂಲಕ ರಾಜ್ಯವು ತನ್ನ ಕ್ವಾಂಟಮ್ ತಂತ್ರಜ್ಞಾನ ನಾಯಕತ್ವವನ್ನು ನಿರ್ಮಿಸುವಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯನ್ನು ಇಟ್ಟಿದೆ ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ಐಟಿಬಿಟಿ ಇಲಾಖೆಯ ಪ್ರಮುಖ ಸ್ಥಳೀಯ ಆರ್ಥಿಕ ವೇಗವರ್ಧನೆ ಕಾರ್ಯಕ್ರಮ LEAP ಅಡಿಯಲ್ಲಿ ನೀಡಲಾಗುವ ಈ ಯೋಜನೆಯು ಶೈಕ್ಷಣಿಕ ಹಾಗೂ ಉದ್ಯಮಕ್ಕೆ ಕ್ವಾಂಟಮ್ ಕಂಪ್ಯೂಟಿಂಗ್

ಇದು ೨ ಲಕ್ಷಕ್ಕೂ ಹೆಚ್ಚು ನೇರ ಉದ್ಯೋಗಗಳನ್ನು ಸೃಷ್ಟಿಸುವ ಮೂಲಕ ೨೦೩೫ರ ವೇಳೆಗೆ ರಾಜ್ಯವನ್ನು ೨೦ ಬಿಲಿಯನ್ ಡಾಲರ್ ಕ್ವಾಂಟಮ್ ಆರ್ಥಿಕತೆಯಾಗಿ ಬೆಳೆಸುವ ಗುರಿಯನ್ನು ಹೊಂದಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

***************

ಬಾಗಲಕೋಟೆ ಜಿಲ್ಲೆಯಲ್ಲಿ ಕೇಂದ್ರ ಸರಕಾರದ ಮಾರ್ಗಸೂಚಿಯನ್ವಯ ಎಲ್.ಪಿ.ಜಿ ಗ್ಯಾಸ್ ವಿತರಣೆಗೆ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಎಲ್.ಪಿ.ಜಿ ವಿತರಕರ ಸಂಘದೊಂದಿಗೆ ಸಭೆ ನಡೆಸಿ, ಮಾತನಾಡಿದ ಅವರು, ಜಿಲ್ಲೆಯಲ್ಲಿ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರಗಳ ಸಮರ್ಪಕ ಸಂಗ್ರಹವಿದ್ದು, ಸರಬರಾಜು ಸರಾಗವಾಗಿ ನಡೆಯುತ್ತಿದೆ. ಸಾರ್ವಜನಿಕರು ಯಾವುದೇ ರೀತಿಯ ಆಂತಕಕ್ಕೊಳಗಾಗದೆ, ಅಗತ್ಯವಿರುವಷ್ಟು ಸಿಲಿಂಡರ್ ಪಡೆಯುವಂತೆ ಮನವಿ ಮಾಡಿದ್ದಾರೆ.

***************

ಚಾಮರಾಜನಗರ ಜಿಲ್ಲೆಯಲ್ಲಿ ಆದ್ಯತೆ ಮೇರೆಗೆ  ಆಸ್ಪತ್ರೆ, ಹಾಸ್ಟೆಲ್ ಹಾಗೂ ಬಿಸಿಯೂಟ ಯೋಜನೆಗೆ ಸಿಲಿಂಡರ್  ಪೂರೈಕೆ ಮಾಡಬೇಕು ಎಂದು ಚಾಮರಾಜನಗರ ಜಿಲ್ಲಾಧಿಕಾರಿ ಶ್ರೀರೂಪಾ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು,   ಮಲೆ ಮಹದೇಶ್ವರ ಬೆಟ್ಟದಲ್ಲಿ ಸೋಮವಾರದಿಂದ ಯುಗಾದಿ ಜಾತ್ರೆ ಆರಂಭಗೊಳ್ಳಲಿದೆ. ದೇವಾಲಯದಲ್ಲಿ ಒಂದು ವಾರಕ್ಕೆ ಅಗತ್ಯದಷ್ಟು ಸಿಲಿಂಡರ್ ದಾಸ್ತಾನಿದೆ, ಕಟ್ಟಿಗೆ ಒಲೆಯೂ ತಯಾರಿದ್ದು ದಾಸೋಹಕ್ಕೆ ಯಾವುದೇ ತೊಂದರೆಯಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಜಿಲ್ಲೆಯಲ್ಲಿ ಒಟ್ಟು ೮೨ ಪೆಟ್ರೋಲ್ ಬಂಕ್‌ಗಳಿದ್ದು ಇನ್ನೆರಡು ತಿಂಗಳಿಗೆ ಆಗುವಷ್ಟು ಇಂಧನ ಲಭ್ಯತೆ ಇದೆ ಎಂದು ಹೇಳಿದ್ದಾರೆ.

***************

ಯಾದಗಿರಿ ಜಿಲ್ಲೆಯಲ್ಲಿ ಗೃಹ ಬಳಕೆಯ ಎಲ್‌ಪಿಜಿ ಅಡುಗೆ ಅನಿಲ ಸಿಲಿಂಡರ್‌ಗಳು ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿದ್ದು, ಗ್ರಾಹಕರು ಯಾವುದೇ ರೀತಿಯ ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸ್ಪಷ್ಟಪಡಿಸಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದು ತಿಳಿಸಿದ್ದಾರೆ. ಗ್ರಾಹಕರು ಅನಾವಶ್ಯಕವಾಗಿ ಹೆಚ್ಚುವರಿ ಸಿಲಿಂಡರ್‌ಗಳನ್ನು ಸಂಗ್ರಹಿಸಿಡಬಾರದು ಎಂದು ಮನವಿ ಮಾಡಿದ್ದಾರೆ.

***************

ವಿಜಯನಗರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಜಿಲ್ಲಾಮಟ್ಟದ  ಎಚ್‌ಪಿವಿ ಲಸಿಕೆ ಅಭಿಯಾನವನ್ನು ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಶಂಕರ್ ನಾಯಕ್ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ವಿಶ್ವದಲ್ಲೇ ಗರ್ಭಕಂಠದ ಕ್ಯಾನ್ಸರ್ ರೋಗಕ್ಕೆ ತುತ್ತಾಗುವವರಲ್ಲಿ ಭಾರತ  ಎರಡನೇ ಸ್ಥಾನದಲ್ಲಿದೆ. ಈ ಹಿನ್ನೆಲೆಯಲ್ಲಿ ದೇಶಾದ್ಯಂತ  ಎಚ್ ಪಿ ವಿ ಲಸಿಕಾ ಅಭಿಯಾನ ಜರುಗುತ್ತಿದೆ.  ಜಿಲ್ಲೆಯಲ್ಲಿ ೧೪ ರಿಂದ ೧೫ ವರ್ಷದೊಳಗಿನ ಮಕ್ಕಳಿಗೆ ಲಸಿಕೆಯನ್ನು ಸರ್ಕಾರದ ಆದೇಶದಂತೆ  ಉಚಿತವಾಗಿ  ನೀಡುವ ಗುರಿ ಹೊಂದಲಾಗಿದೆ ಸಷ್ಟಪಡಿಸಿದ್ದಾರೆ.

***************

ಐಪಿಎಲ್ ಉದ್ಘಾಟನಾ ಪಂದ್ಯ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವುದರಿಂದ ನಾಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ತಜ್ಞರು ಪರಿಶೀಲನೆ ನಡೆಸಲಿದ್ದಾರೆ. ಈಗಾಗಲೇ ಕ್ರೀಡಾಂಗಣಕ್ಕೆ ನೂತನ ಪ್ರವೇಶ ದ್ವಾರಗಳನ್ನು ಸ್ಥಾಪಿಸಲಾಗಿದೆ. ತುರ್ತು ಸಂದರ್ಭದಲ್ಲಿ ಬಳಸಲು ನಿರ್ಗಮನ ಮತ್ತು ಪ್ರವೇಶ ದ್ವಾರಗಳನ್ನು ರಚಿಸಲಾಗಿದೆ. ಕಾಲ್ತುಳಿತದ ಬಳಿಕ ಈ ಕ್ರೀಡಾಂಗಣದಲ್ಲಿ ಆರ್‌ಸಿಬಿ ಮೊದಲ ಪಂದ್ಯ ಆಡಲಿದೆ.

ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಇದೇ ೨೮ರಂದು ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ ಕಣಕ್ಕಿಳಿಯಲಿದೆ.

*******ಮುಕ್ತಾಯ********